ಕರ್ನಾಟಕ ಸರ್ಕಾರ
ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ,
ಗ್ರಾಮೀಣಾಭಿವೃದ್ಧಿ ಪಂಚಾಯತ್‌ರಾಜ್ ಇಲಾಖೆ
2ನೇ ಮಹಡಿ, 3ನೇ ಹಂತ, ಬಹುಮಹಡಿಕಟ್ಟಡ, ಬೆಂಗಳೂರು-1.
ದೂ. 080-22372738E-mail: nregs-ka@nic.in

ಸಂಖ್ಯೆ: ಗ್ರಾಅಪ: 81 :ಉಖಾಯೋ 2016 ದಿನಾಂಕ: 20.05.2016

## ಸುತ್ತೋಲೆ

ವಿಷಯ: ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಅನುಷ್ಠಾನ ಇಲಾಖೆಗಳಿಗೆ ಆಡಳಿತಾತ್ಮಕ ವೆಚ್ಚದಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು.

ಉಲ್ಲೇಖ: 1. ಈ ಕಛೇರಿಯ ಪತ್ರ ಸಂಖ್ಯೆ:ಗ್ರಾಅಪ:186:ಉಖಾಯೋ:2013, ದಿನಾಂಕ:30.04.2014.
2. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ನಡೆಸಿದ ಸಭೆ ದಿನಾಂಕ:05.01.2016.

************

ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ ಅಡಿಯಲ್ಲಿ ಅನುಷ್ಠಾನ ಇಲಾಖೆಗಳು ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಮೂಲಭೂತ ಸೌಕರ್ಯಗಳ ಕೊರತೆ ಇರುವುದರಿಂದ ಗಣಕಯಂತ್ರಗಳ ಖರೀದಿ, ಗಣಕಯಂತ್ರ ನಿರ್ವಾಹಕರನ್ನು ನೇಮಿಸಿಕೊಳ್ಳಲು, ಲಿಪಿಕ ಸಹಾಯಕರನ್ನು ನೇಮಿಸಿಕೊಳ್ಳಲು ಐ.ಇ.ಸಿ ಚಟುವಟಿಕೆಗಳಿಗೆ ಹಾಗೂ ಇತರೆ ವೆಚ್ಚಗಳಿಗೆ ಬಂಡವಾಳ ಇಲ್ಲದೆ ಇರುವುದರಿಂದ ಈಗಾಗಲೇ ತಿಳಿಸಿರುವಂತೆ ಈ ಹಿಂದೆ ಉಲ್ಲೇಖ (1) ರ ಪತ್ರದಲ್ಲಿ ಅನುಷ್ಠಾನ ಇಲಾಖೆಗಳು ತಮ್ಮ ಲಾಗಿನ್ ವತಿಯಿಂದ ಬರಿಸಿದ ಕೂಲಿ ವೆಚ್ಚದ ಶೇ.1 ರಷ್ಟನ್ನು ಆಡಳಿತಾತ್ಮಕ ವೆಚ್ಚವಾಗಿ ಬರಿಸಲು ಅನುಮತಿ ನೀಡಲಾಗಿತ್ತು.

ಉಲ್ಲೇಖ (2)ರಲ್ಲಿನ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು ನಡೆಸಿದ ದಿನಾಂಕ:05.01.2016 ಸಭೆಯಲ್ಲಿ ತೀರ್ಮಾನಿಸಿದಂತೆ ಈ ಕೆಳಕಂಡಂತೆ ಸೂಚನೆ ನೀಡಲಾಗಿದೆ.

1. ಅನುಷ್ಠಾನ ಇಲಾಖೆಯವರು ಹಿಂದಿನ ವರ್ಷ ಮಾಡಿರುವ ಒಟ್ಟು ಆರ್ಥಿಕ ವೆಚ್ಚ ಅಥವಾ ಈ ವರ್ಷದ ಅನುಮೋದಿತ ಕ್ರಿಯಾ ಯೋಜನೆಯಂತೆ ಎಷ್ಟು ಉದ್ಯೋಗ ಖಾತರಿ ಯೋಜನೆ ಅನುದಾನ ಬಳಸಲಿದ್ದಾರೆ, ಅದರ ಶೇ.1 ರಷ್ಟು ಮೊತ್ತವನ್ನು ಸಂಬಂಧಪಟ್ಟ ಅನುಷ್ಠಾನ ಇಲಾಖೆಗಳು ತಮ್ಮ ಜಿಲ್ಲೆಗಳಲ್ಲಿ ಮೊತ್ತ ಪಾವತಿ ಮಾಡಬಹುದು.
    - ಉದ್ಯೋಗ ಖಾತರಿ ಯೋಜನೆಯಲ್ಲಿ ಬೇಕಾಗಿರುವ ವೆಚ್ಚವನ್ನು ಪಟ್ಟಿ ಮಾಡಿ, ಸಂಬಂಧಿಸಿದ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಅನುಮೋದನೆ ಪಡೆಯುವುದು.
    - ಸದರಿ ಸರಕು ಸಾಮಗ್ರಿಗಳು ಅಥವಾ ಇತರೆ ಬಿಲ್ಲುಗಳನ್ನು ಸಂಬಂಧಿಸಿದ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸಲ್ಲಿಸಬೇಕು.
    - ಸದರಿ ಬಿಲ್ಲುಗಳನ್ನು ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಪರಿಶೀಲಿಸಿ efms ಮೂಲಕ ಆಡಳಿತ ವೆಚ್ಚದಿಂದ ಸದರಿ ಮೊತ್ತವನ್ನು ಪಾವತಿಸುವುದು. ಈ ರೀತಿ ಅವರು ತ್ರೈಮಾಸಿಕ/ಅರ್ಧ ವಾರ್ಷಿಕ/ವರ್ಷಕೊಮ್ಮೆ ಅಥವಾ ಅವಶ್ಯಕತೆಗೆ ಅನುಸಾರವಾಗಿ ವೆಚ್ಚವನ್ನು ಪಾವತಿಸಬಹುದು.

(ಮುನೀಷ್ ಮೌದ್ಗಿಲ್)
ಆಯುಕ್ತರು, ಗ್ರಾಮೀಣಾಭಿವೃದ್ಧಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ

ಇವರಿಗೆ,

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್ತಗಳ, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
3. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು
4. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರು, ಕರ್ನಾಟಕ ಸರ್ಕಾರ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ಆಪ್ತ ಕಾರ್ಯದರ್ಶಿಗಳಿಗೆ
6. ಸರ್ಕಾರದ ಎಲ್ಲಾ ಇಲಾಖೆಗಳ ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ / ಪ್ರಧಾನ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು, ಬೆಂಗಳೂರು
7. ಪ್ರಾದೇಶಿಕ ಆಯುಕ್ತರು ಬೆಂಗಳೂರು, ಮೈಸೂರು, ಗುಲ್ಬರ್ಗಾ, ಬೆಳಗಾಂ
8. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು
9. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಗಳು (ಅರಣ್ಯ ಪಡೆ ಮುಖ್ಯಸ್ಥರು), ಅರಣ್ಯ ಭವನ, ಬೆಂಗಳೂರು
10. ಮುಖ್ಯ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರ್ ಇಲಾಖೆ, ಬೆಂಗಳೂರು
11. ಆಯುಕ್ತರು, ಜಲಾನಯನ ಅಭಿವೃದ್ಧಿ ಇಲಾಖೆ, ಕಾವೇರಿ ಭವನ, ಬೆಂಗಳೂರು
12. ಆಯುಕ್ತರು, ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು
13. ಆಯುಕ್ತರು, ಪಶುಸಂಗೋಪನ ಇಲಾಖೆ, ವಿ.ವಿ.ಟವರ್, ಬೆಂಗಳೂರು
14. ರೇಷ್ಮೆ ಅಭಿವೃದ್ಧಿ ಆಯುಕ್ತರು, ರೇಷ್ಮೆ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು
15. ನಿರ್ದೇಶಕರು, ತೋಟಗಾರಿಕೆ ಇಲಾಖೆ, ಲಾಲ್‌ಬಾಗ್ ರಸ್ತೆ, ಬೆಂಗಳೂರು
16. ನಿರ್ದೇಶಕರು, ಮೀನುಗಾರಿಕೆ ಇಲಾಖೆ, ವಿ.ವಿ.ಟವರ್, ಬೆಂಗಳೂರು
17. ಮುಖ್ಯ ಅಭಿಯಂತರರು (ಸಣ್ಣ ನೀರಾವರಿ), ಬೆಂಗಳೂರು / ಬಿಜಾಪುರ
18. ಆಯುಕ್ತರು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
19. ವಿಶೇಷ ಆಯುಕ್ತರು, ಎಂ.ಜಿ.ಎನ್.ಆರ್.ಇ.ಜಿ.ಎ., ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ
20. ಮುಖ್ಯ ಕಾರ್ಯಾಚರಣೆ ಅಧಿಕಾರಿಗಳು, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಗ್ರಾಅಪ ಇಲಾಖೆ
21. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು
22. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ, ಬೆಂಗಳೂರು
23. ಮುಖ್ಯ ಆರ್ಥಿಕ ಸಲಹೆಗಾರು / ಜಂಟಿ ನಿರ್ದೇಶಕರು, ತೋಟಗಾರಿಕೆ / ತಾಂತ್ರಿಕ / ಆಡಳಿತ, ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ, ಬೆಂಗಳೂರು
24. ರಾಜ್ಯದ ಎಲ್ಲಾ ಜಿಲ್ಲೆಗಳ ಉದ್ಯೋಗ ಖಾತರಿ ಯೋಜನೆಯ ಒಂಬುಡ್ಸ್‌ಮನ್‌ಗಳಿಗೆ
25. ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು
26. ವಿಶೇಷಾಧಿಕಾರಿ ಗಣಕಕೋಶ, ಗ್ರಾಅಪ ಇಲಾಖೆ ಇವರು ಇಲಾಖಾ ವೆಬ್ ಸೈಟ್‌ನಲ್ಲಿ ಅಳವಡಿಸಲು ಕೋರಿದೆ.
27. ಶ್ರೀ ವೈ. ಮಹಾಂಕಾಳಪ್ಪ, ಸಂಪಾದಕರು ಹಾಗೂ ಸಾರ್ವಜನಿಕ ಸಂಪರ್ಕಾಧಿಕಾರಿಗಳವರ ಮಾಹಿತಿಗಾಗಿ ಹಾಗೂ ಇದನ್ನು ಕರ್ನಾಟಕ ವಿಕಾಸದಲ್ಲಿ ಪ್ರಕಟಿಸಲು ಕೋರಿದೆ.
28. M/s Effia Technologies, ಅವರಿಗೆ www.end2endsolutions.com ನಲ್ಲಿ ಪ್ರಕಟಿಸಲು/ಅಳವಡಿಸಲು ಕೋರಿದೆ.
29. ಹೆಚ್ಚಿನ ಪ್ರತಿಗಳು/ಮಹಾ ಕಡತಕ್ಕೆ